EMAIL : dairyadadaari@gmail.com ಸಂಪುಟ: 01 ಸಂಚಿಕೆ: 202

ಬೆಲೆ ರೂ : 2.00

ರಾಯಚೂರು

ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 21-07-2026

## ಮನೆ ಮನೆಗೆ ತೆರಳಿ ಶಾಶ್ವತ ನಿವಾಸ ಪ್ರಮಾಣಪತ್ರ ಮತ್ತು ಜಾತಿ ಪ್ರಮಾಣಪತ್ರ ವಿತರಿಸುವ ಅಭಿಯಾನಕ್ಕೆ ಸಿಎಂ ಚಾಲನೆ



**ಬೆಂಗಳೂರು, ಜು.20–** ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆಗೆ ಪೂರಕವಾಗಿ ಶಾಶ್ವತ ನಿವಾಸ ಪ್ರಮಾಣಪತ್ರ ಮತ್ತು ಜಾತಿ ಪ್ರಮಾಣಪತ್ರಗಳನ್ನು ಮನೆ ಮನೆಗೆ ತೆರಳಿ ವಿತರಿಸುವ ಅಭಿಯಾನಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಚಾಲನೆ ನೀಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ಆನ್‌ಲೈನ್ ಸೇವೆಯನ್ನು ಲೋಕಾರ್ಪಣೆ ಮಾಡಿದ ಬಳಿಕ ಮಾತನಾಡಿದ ಅವರು, ಚುನಾವಣಾ ಆಯೋಗ ಸಮತಿಸಿರುವ ಖಾಯಂ ನಿವಾಸಿ ಪ್ರಮಾಣಪತ್ರ ಮತ್ತು ಜಾತಿ ಪ್ರಮಾಣಪತ್ರಗಳನ್ನು ಉಚಿತವಾಗಿ ಮನೆ ಮನೆಗೆ ತೆರಳಿ ನೀಡಲಾಗುತ್ತಿದೆ ಎಂದು ಹೇಳಿದರು.

ದೇಶದಲ್ಲಿ ಯಾವ ರಾಜ್ಯದಲ್ಲೂ ಮನೆ ಮನೆಗೆ ತೆರಳಿ ಪ್ರಮಾಣಪತ್ರಗಳನ್ನು ನೀಡುತ್ತಿಲ್ಲ. ಆದರೆ ನಮ ಸರ್ಕಾರ ಪ್ರತಿಯೊಬ್ಬರು ಬದುಕನ್ನು ಸುಧಾರಿಸುವ ಕೆಲಸ ಮಾಡುತ್ತಿದೆ ಎಂದರು.ದೇವರಾಜು ಅರಸು ಕಾಲದಲ್ಲಿ ಭೂಮಿ ಹಕ್ಕು ನೀಡಲಾಗಿತ್ತು. ಎಸ್.ಎಂ.ಕೃಷ್ಣ ಅವಧಿಯಲ್ಲಿ ಭೂಮಿ ಯೋಜನೆಯಡಿ ಪಹಣಿ ನೀಡಲಾಗಿದೆ. ತಾವು ಮೊದಲಿನಿಂದಲೂ ನಿಮ ಮತ ನಿಮ ಹಕ್ಕು ಎಂದು ಹೇಳುತ್ತಾ ಬಂದಿದ್ದೇನೆ ಎಂದರು.

ಖಾಯಂ ವಾಸ ಪ್ರಮಾಣಪತ್ರ ಅಥವಾ ಜಾತಿ ಪ್ರಮಾಣಪತ್ರಗಳನ್ನು ನೀಡಲು ಏಕಾಏಕಿ ನಿರ್ಧಾರ ಮಾಡಿಲ್ಲ, ಲಭ್ಯವಿರುವ ನಿಯಮಗಳನ್ನು ಪರಿಶೀಲಿಸಲಾಗಿದೆ. ಚುನಾವಣಾ ಆಯೋಗದ ಅಧಿಕಾರಿಗಳು ಹಾಗೂ ಸಕ್ಷಮ ಪ್ರಾಧಿಕಾರಗಳ ಜೊತೆ ಚರ್ಚಿಸಿ ಅವರು ನೀಡಿದ ನಿರ್ದೇಶನದ ಅನುಸಾರವೇ ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.ವಿರೋಧ ಪಕ್ಷಗಳ ಸ್ನೇಹಿತರು ಅನಗತ್ಯವಾದ ಅಪಪ್ರಚಾರ ಮಾಡುತ್ತಿದ್ದಾರೆ. ಅದರಲ್ಲಿ ಯಾವುದೇ ಉರುಳಿಲ್ಲ. ನಾವು ಯಾವುದೇ ರೀತಿಯ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡಿಲ್ಲ ಎಂದು ಸ್ಪಷ್ಟಪಡಿಸಿದರು.

ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದೇ ಇದ್ದರೆ ಸರ್ಕಾರದ ಸೌಲಭ್ಯಗಳು ಇಲ್ಲವಾಗುತ್ತವೆ. ಹೀಗಾಗಿ ಪ್ರತಿಯೊಬ್ಬರು ಮತದಾರರ ಪಟ್ಟಿಗೆ ಹೆಸರು ಸೇರಿಸಲು ಮುಂದಾಗಬೇಕು. ಅದಕ್ಕೆ ಬೇಕಾದ ದಾಖಲಾತಿಗಳನ್ನು ಸರ್ಕಾರ ಒದಗಿಸುತ್ತದೆ ಎಂದು ತಿಳಿಸಿದರು.

ಪ್ರಮಾಣ ಪತ್ರಗಳನ್ನು ಭೌತಿಕವಾಗಿಯಾದರೂ ಪಡೆದುಕೊಳ್ಳಬಹುದು ಅಥವಾ ಆನ್‌ಲೈನ್ ಮೂಲಕವೂ ಅರ್ಜಿ ಸಲ್ಲಿಸಿ ಪಡೆದುಕೊಳ್ಳಬಹುದು ಎಂದು ವಿವರಿಸಿದರು.ಕಂದಾಯ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಮಾತನಾಡಿ, ಕೇಂದ್ರ ಚುನಾವಣಾ ಆಯೋಗ ಎಸ್‌ಐಆರ್ ನಡೆಸುತ್ತಿದೆ. ಅದಕ್ಕೆ ಸಹಾಯವಾಗುವಂತೆ ದಾಖಲೆ ನೀಡಲು ನಮ ಸರ್ಕಾರ ಹೊಸ ಹೆಜ್ಜೆ ಇಟ್ಟಿದೆ. ಜನರ ಸೇವೆಗಾಗಿ ಕಾರ್ಯಕ್ರಮ ನೀಡುತ್ತಿದೆ ಎಂದು ಹೇಳಿದರು.

ಶಾಶ್ವತ ನಿವಾಸಿ ಪ್ರಮಾಣ ಪತ್ತ ನೀಡಲು 11 ಮಾನದಂಡಗಳನ್ನು ಬಳಸಿಕೊಳ್ಳುತ್ತಿದ್ದೇವೆ. ಜಾತಿ ಪ್ರಮಾಣ ಪತ್ರವನ್ನೂ ನೀಡುತ್ತಿದ್ದೇವೆ. ಉದ್ಯೋಗ, ವಿವಾಹ ಪರಿಶೀಲಿಸುತ್ತೆ?ವೆ. ರಾಜ್ಯದಲ್ಲಿ 10 ವರ್ಷ ವಾಸ ಮಾಡಿರಬೇಕು. ಕರ್ನಾಟಕದಲ್ಲೇ ಜನಿಸಿದವರಿಗೆ ಪ್ರಮಾಣ ಪತ್ರ ನೀಡಲಾಗುವುದು ಎಂದು ಹೇಳಿದರು.

ಮನೆಮನೆಗೆ ಭೇಟಿ ದಾಖಲೆಗಳನ್ನ ಸಲ್ಲಿಸುತ್ತೆವೆ. ಸಾರ್ವಜನಿಕರು ಕಚೇರಿ ಅಲೆದಾಟಕ್ಕೆ ಬ್ರೆಕ್ ಹಾಕುತ್ತಿದ್ದೇವೆ ಎಂದು ಹೇಳಿದರು.


ರಾಜ್ಯದಲ್ಲಿ 2.3 ಕೋಟಿ ಅನುಸೂಚಿತ ಜಾತಿ ಮತ್ತು ಪಂಗಡಗಳ ಪ್ರಮಾಣಾ ಪತ್ರಗಳಿವೆ. ಸಾಮಾನ್ಯಜಾತಿಗಳು 1.8 ಕೋಟಿ ಪ್ರಮಾಣ ಪತ್ರ ಇವೆ. ಒಟ್ಟು ರಾಜ್ಯದಲ್ಲಿ 4.85 ಕೋಟಿ ಜನರಿಗೆ ಜಾತಿ ಪ್ರಮಾಣ ಪತ್ರ ನೀಡಲಾಗುತ್ತಿದೆ ಎಂದು ಹೇಳಿದರು.

ವಾಸ ಪ್ರಮಾಣ ಪತ್ರ ಮತ್ತು ಜಾತಿ ಪ್ರಮಾಣ ಪತ್ರಗಳನ್ನು ವೆಬ್ ಸೈಟ್ ಮೂಲಕ ಉಚಿತವಾಗಿ ಡೌನ್ ಲೋಡ್ ಮಾಡಿಕೊಳ್ಳಬಹುದು. ನಾಗರೀಕ ಸೌಲಭ್ಯ ಕೇಂದ್ರಗಳಿಂದಲೂ ಸಹಾಯ ಪಡೆಯಬಹುದು. ನೇರವಾಗಿಯೂ ಪ್ರಮಾಣ ಪತ್ರ ಪಡೆಯಬಹುದು, ಗ್ರಾಮ ಒನ್, ಬಾಪೂಜಿ ಸೇವಾ ಕೇಂದ್ರಗಳಿಂದ ಪಡೆಯಬಹುದು ಎಂದು ಹೇಳಿದರು. ದೂರುಗಳಿದ್ದರೆ ಸಕ್ಷಮ ಪ್ರಾಧಿಕಾರದಲ್ಲಿ ಅರ್ಜಿ ಸಲ್ಲಿಸಬಹುದು. ಅವುಗಳನ್ನು ತಹಸೀಲ್ದಾರ್, ಉಪತಹಸೀಲ್ದಾರ್ ಗಮನಿಸುತ್ತಾರೆ. ಜಿಲ್ಲಾಧಿಕಾರಿಗಳ ಹಂತದಲ್ಲಿ ಮೇಲನವಿಗೆ ಅವಕಾಶ ನೀಡಲಾಗಿದೆ ಎಂದು ಹೇಳಿದರು.

ವಾಸ ಪ್ರಮಾಣ ಪತ್ರ ಪಡೆಯಲು ಕರ್ನಾಟಕದಲ್ಲಿಯೇ ಜನಿಸಿರಬೇಕು, ಸಾಮಾನ್ಯ ವಾಸಸ್ಥಳ ತಂದೆ, ತಾಯಿ ಇಲ್ಲಿ 10 ವರ್ಷ ಇರಬೇಕು. ಅರ್ಜಿದಾರರು ಶಿಕ್ಷಣ ಸಂಸ್ಥೆಗಳಲ್ಲಿ ಪಿಯುಸಿ ಶಿಕ್ಷಣ ಪಡೆದಿರಬೇಕು. ಪೋಷಕರು, ಸಂಗಾತಿ ವಾಸಸ್ಥಳ ಇಲ್ಲಿರಬೇಕು. ಇಲ್ಲಿ ವಸತಿ, ಸ್ತಿರಾಸ್ಥಿ ಹೊಂದಿದ್ದರು ಅರ್ಹರಾಗಿರುತ್ತಾರೆ ಎಂದು ವಿವರಿಸಿದರು.

ಮತದಾರರ ಪಟ್ಟಿಯಲ್ಲಿ ಅರ್ಹರ ಹೆಸರಿರಬೇಕು. ಅದಕ್ಕಾಗಿ ಕಂದಾಯ ದಾಖಲೆಗಳನ್ನು ಒದಗಿಸಲಾಗುತ್ತಿದೆ. ಇಲ್ಲಿನವರನ್ನ ವಿವಾಹ ಆದರೂ ಖಾಯಂ ವಾಸಿ ಪ್ರಮಾಣ ಪತ್ರಕ್ಕೆ ಅರ್ಹರು, ಅತಂಹವರಿಗೂ ಅರ್ಜಿ ಸಲ್ಲಿಸಲು ಅವಕಾಶವಿದೆ ಎಂದು ಹೇಳಿದರು.

## ಡೆಂಗ್ಯೂ ವಿರುದ್ಧ ದೇಶದ ಮೊದಲ ಲಸಿಕೆಗೆ ಕೇಂದ್ರ ಅಸ್ತು




**ನವದೆಹಲಿ,ಜು.20:** ದೇಶದಲ್ಲಿ ಪ್ರತಿವರ್ಷ ಲಕ್ಷಾಂತರ ಜನರನ್ನು ಬಾಧಿಸುವ ಮಾರಕ ಡೆಂಗ್ಯೂ ಜ್ವರಕ್ಕೆ ಕೊನೆಗೂ ಮೊದಲ ಲಸಿಕೆ ಲಭ್ಯವಾಗಿದೆ. ಜಪಾನ್ ಮೂಲದ ಪ್ರಸಿದ್ಧ ಔಷಧ ತಯಾರಿಕಾ ಸಂಸ್ಥೆ 'ಟಕೆಡಾ ಬಯೋಫಾರ್ಮಾ ಸ್ಯುಟಿಕಲ್ಸ್' ಅಭಿವೃದ್ಧಿಪಡಿಸಿರುವ 'ಕ್ಯುಡೆಂಗಾ' ಲಸಿಕೆಯ ತುರ್ತು ಬಳಕೆಗೆ ಭಾರತೀಯ ಔಷಧ ನಿಯಂತ್ರಣ ಮಹಾನಿರ್ದೇಶನಾಲಯ ಅಂತಿಮ ಅನುಮೋದನೆ ನೀಡಿದೆ.ಭಾರತದಲ್ಲಿ ಲಭ್ಯವಾಗುತ್ತಿರುವ ಮೊದಲ ಡೆಂಗ್ಯೂ ಲಸಿಕೆ ಇದಾಗಿದ್ದು, 4 ವರ್ಷದಿಂದ 60 ವರ್ಷ ವಯಸ್ಸಿನವರೆಗಿನ ನಾಗರಿಕರಿಗೆ ಇದನ್ನು ನೀಡಬಹುದಾಗಿದೆ.ಈ ಲಸಿಕೆಯು ಡೆಂಗ್ಯೂ ವೈರಸ್‌ನ ಎಲ್ಲಾ ನಾಲ್ಕು ಪ್ರಮುಖ ಉಪ-ಪ್ರಭೇದಗಳ ವಿರುದ್ಧ ಪರಿಣಾಮಕಾರಿ ರಕ್ಷಣೆ ನೀಡುತ್ತದೆ.ಈ ಹಿಂದೆ ಡೆಂಗ್ಯೂ ಬಂದಿರಲಿ ಅಥವಾ ಬಾರದಿರಲಿ, ಯಾವುದೇ ಮುಂಜಾಗ್ರತಾ ರಕ್ತ ಪರೀಕ್ಷೆ ಇಲ್ಲದೆಯೇ ಈ ಲಸಿಕೆಯನ್ನು ನೇರವಾಗಿ ಪಡೆಯಬಹುದು. ಇದನ್ನು ಚರ್ಮದ ಅಡಿಯಲ್ಲಿ 0.5ಎಂಐ ನಂತೆ ಎರಡು ಡೋಸ್‌ಗಳಲ್ಲಿ ನೀಡಲಾಗುತ್ತದೆ. ಮೊದಲ ಡೋಸ್ ಪಡೆದ 3 ತಿಂಗಳ ನಂತರ ಎರಡನೇ ಡೋಸ್ ಪಡೆಯಬೇಕಾಗುತ್ತದೆ.

**ಶೇ. 80.2 ರಷ್ಟು ಪರಿಣಾಮಕಾರಿ:** ಜಾಗತಿಕ ಮಟ್ಟದಲ್ಲಿ 28,000 ಕ್ಕೂ ಹೆಚ್ಚು ಜನರ ಮೇಲೆ ನಡೆದ ಕ್ಲಿನಿಕಲ್ ಪ್ರಯೋಗಗಳ ಪ್ರಕಾರ, ಈ ಲಸಿಕೆಯು ಶೇ. 80.2 ರಷ್ಟು ಡೆಂಗ್ಯೂ ಬಾರದಂತೆ ತಡೆಯುತ್ತದೆ. ಅಲ್ಲದೆ, ಸೋಂಕು ತಗುಲಿದರೂ ಆಸ್ಪತ್ರೆಗೆ ದಾಖಲಾಗುವ ಸಾಧ್ಯತೆಯನ್ನು ಶೇ. 90.4 ರಷ್ಟು ಕಡಿಮೆ ಮಾಡುತ್ತದೆ ಎಂದು ವರದಿಗಳು ದೃಢಪಡಿಸಿವೆ.

**ಭಾರತಕ್ಕೆ ಏಕಾಗಿರಬೇಕು ಲಸಿಕೆ?:** ವಿಶ್ವದಾದ್ಯಂತ ವರದಿಯಾಗುವ ಒಟ್ಟು ಡೆಂಗ್ಯೂ ಪ್ರಕರಣಗಳಲ್ಲಿ ಮೂರನೇ ಒಂದು ಭಾಗದಷ್ಟು ಭಾರತದಲ್ಲೇ ದಾಖಲಾಗುತ್ತಿವೆ. 2025 ರಲ್ಲೇ ದೇಶದಲ್ಲಿ 1.13 ಲಕ್ಷಕ್ಕೂ ಅಧಿಕ ಪ್ರಕರಣಗಳು ಅಧಿಕೃತವಾಗಿ ದಾಖಲಾಗಿದ್ದವು. ಹವಾಮಾನ ವೈಪರೀತ್ಯ ಮತ್ತು ಹೆಚ್ಚುತ್ತಿರುವ ನಗರೀಕರಣದಿಂದಾಗಿ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ದೇಶದ ಆರೋಗ್ಯ ವ್ಯವಸ್ಥೆಗೆ ಡೆಂಗ್ಯೂ ದೊಡ್ಡ ಸವಾಲಾಗಿ ಪರಿಣಮಿಸಿದೆ. ಈ ಹಿನ್ನೆಲೆಯಲ್ಲಿ 'ಕ್ಯುಡೆಂಗಾ' ಲಸಿಕೆಯು ದೇಶದ ಆರೋಗ್ಯ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲಾಗಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಈಗಾಗಲೇ ಬ್ರೆಜಿಲ್, ಅರ್ಜೆಂಟೀನಾ, ಇಂಡೋನೇಷ್ಯಾ ಸೇರಿದಂತೆ ವಿಶ್ವದ 43 ದೇಶಗಳಲ್ಲಿ ಈ ಲಸಿಕೆಯನ್ನು ಯಶಸ್ವಿಯಾಗಿ ಬಳಸಲಾಗುತ್ತಿದ್ದು, ವಿಶ್ವ ಆರೋಗ್ಯ ಸಂಸ್ಥೆ ಕೂಡ ಇದಕ್ಕೆ ಮಾನ್ಯತೆ ನೀಡಿದೆ. ಭಾರತೀಯ ಮಾರುಕಟ್ಟೆಗೆ ಶೀಘ್ರದಲ್ಲೇ ಈ ಲಸಿಕೆ ಅಧಿಕೃತವಾಗಿ ಬಿಡುಗಡೆಯಾಗಲಿದೆ ಎಂದು ಕಂಪನಿಯ ಪ್ರಕಟಣೆ ತಿಳಿಸಿದೆ.

## ಸಿರವಾರ ತಹಸೀಲ್ದಾರ್ ಕಚೇರಿಯ ಅಟಲ್ ಸೇವಾ ಕೇಂದ್ರದಲ್ಲಿ ಮಳೆ ನೀರು ಸೋರಿಕೆ: ಶಾರ್ಟ್ ಸರ್ಕ್ಯೂಟ್ ಭೀತಿ, ತಕ್ಷಣ ದುರಸ್ತಿಗೆ ಸಂಘ ಸಂಸ್ಥೆಗಳ ವತಿಯಿಂದ ಆಗ್ರಹ


ಧೈರ್ಯದ ದಾರಿ


**ಸಿರವಾರ :** ತಾಲೂಕಿನ ತಹಸೀಲ್ದಾರ್ ಕಾರ್ಯಾಲಯದಲ್ಲಿರುವ ಅಟಲ್ ಸೇವಾ ಕೇಂದ್ರದ ಕಟ್ಟಡದ ಮೇಲ್ಛಾವಣಿಯಿಂದ ಇಂದು ಬಂದಿರುವ ಮಳೆಯಿಂದ ಮಳೆನೀರು ಸೋರುತ್ತಿದ್ದು, ಇದರಿಂದ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಆಗುವ ಅಪಾಯವಿದೆ ಎಂದು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಭಾರತೀಯ ಮಾನವ ಹಕ್ಕುಗಳ ಜಿಲ್ಲಾಧ್ಯಕ್ಷರಾದ ಹಿದಾಯತ್ ಬಡೆಘರ್, ಕರ್ನಾಟಕ ರೈತ ಸಂಘದ ಜಿಲ್ಲಾ ಕಾರ್ಯದರ್ಶಿಯಾದ ಹುಲಿಗೆಪ್ಪ ಮಡಿವಾಳ ಹಾಗೂ ಕನ್ನಡ ಸೇನೆ ಕರ್ನಾಟಕ ತಾಲೂಕ ಅಧ್ಯಕ್ಷರಾದ ಮೌನೇಶ್ ಪಿತಗಲ್ ಅವರು, ಈ ಕೂಡಲೇ ಕಟ್ಟಡವನ್ನು ದುರಸ್ತಿಗೊಳಿಸುವಂತೆ ತಹಸೀಲ್ದಾರ್ ಅವರಿಗೆ ಅಗ್ರಹಿಸಿದ್ದಾರೆ

**ಪ್ರಮುಖ ಅಂಶಗಳು:** ಅಪಾಯದ ಮುನ್ಸೂಚನೆ: ಅಟಲ್ ಸೇವಾ ಕೇಂದ್ರದಲ್ಲಿ ಕಂಪ್ಯೂಟರ್ ಮತ್ತು ಇತರೆ ಎಲೆಕ್ಟ್ರಾನಿಕ್ ಉಪಕರಣಗಳಿದ್ದು, ಸೋರುತ್ತಿರುವ ಮಳೆ ನೀರಿನಿಂದ ವಿದ್ಯುತ್ ಅವಘಡಗಳು (ಶಾರ್ಟ್ ಸರ್ಕ್ಯೂಟ್) ಸಂಭವಿಸುವ ಸಾಧ್ಯತೆ ಹೆಚ್ಚಿದೆ.

**ಸಾರ್ವಜನಿಕ ಸೇವೆಗೆ ಅಡ್ಡಿ:** ಮಳೆ ನೀರು ಸೋರುತ್ತಿರುವುದರಿಂದ ಅಲ್ಲಿ ಕೆಲಸ ಮಾಡುವ ಸಿಬ್ಬಂದಿ ಹಾಗೂ ಸೇವೆ ಪಡೆಯಲು ಬರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ.

**ಆಡಳಿತಕ್ಕೆ ಎಚ್ಚರಿಕೆ:** ಯಾವುದೇ ಅನಾಹುತಗಳು ಸಂಭವಿಸುವ ಮುನ್ನವೇ ಎಚ್ಚೆತ್ತುಕೊಂಡಿರುವ ಸಂಘಟನೆಗಳ ಪದಾಧಿಕಾರಿಗಳು,





ಕೂಡಲೇ ಸೋರಿಕೆಯನ್ನು ತಡೆಗಟ್ಟಿ ಕಚೇರಿಯನ್ನು ಸುರಕ್ಷಿತಗೊಳಿಸುವಂತೆ ಒತ್ತಾಯಿಸಿದ್ದಾರೆ.

ಅನಾಹುತ ಸಂಭವಿಸಿದಲ್ಲಿ ಅದಕ್ಕೆ ಆಡಳಿತವೇ ನೇರ ಹೊಣೆಗಾರರಾಗಬೇಕಾಗುತ್ತದೆ ಎಂದು ಎಚ್ಚರಿಸಿರುವ ಸಂಘಟನೆಯ ಮುಖಂಡರು, ತುರ್ತಾಗಿ ದುರಸ್ತಿ ಕಾರ್ಯ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

## ರಾಯಚೂರಿನ IIITಯಲ್ಲಿ 12 ಕೋಟಿ ರೂ. ವೆಚ್ಚದಲ್ಲಿ ಕೃತಕ ಬುದ್ಧಿಮತ್ತೆ ಉತ್ಕೃಷ್ಟತಾ ಕೇಂದ್ರ ಸ್ಥಾಪನೆಗೆ ಸಚಿವ ಸಂಪುಟದ ಅನುಮೋದನೆ:ಪ್ರಿಯಾಂಕ್ ಖರ್ಗೆ

**ಬೆಂಗಳೂರು,ಜು.20–**ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಭಾನುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ಸರ್ಕಾರ ವ್ಯವಹಾರ ನಿರ್ವಹಣೆ ನಿಯಮಗಳು, 1977ರ ಮೊದಲನೇ ಅನುಸೂಚಿಯ ಜನಸಂಖ್ಯೆ 15ರ ಅನ್ವಯ, ರಾಯಚೂರಿನ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ (IIIT)ಯಲ್ಲಿ ಕೃತಕ ಬುದ್ಧಿಮತ್ತೆ ಉತ್ಕೃಷ್ಟತಾ ಕೇಂದ್ರ (Centre of Excellence in Artificial Intelligence - CoE-AI) ಸ್ಥಾಪನೆಗೆ ಅನುಮೋದನೆ ನೀಡಲಾಗಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.



ಈ ಕೇಂದ್ರವನ್ನು ಐದು ವರ್ಷಗಳ ಅವಧಿಯಲ್ಲಿ ಒಟ್ಟು 12 ಕೋಟಿ ವೆಚ್ಚದಲ್ಲಿ ಸ್ಥಾಪಿಸಲಾಗುವುದು. ಇದರಲ್ಲಿ 5 ಕೋಟಿ 2026-27ರ ಬಜೆಟ್ ಘೋಷಣೆಯಡಿ ಹಾಗೂ 7 ಕೋಟಿ LEAP ಕಾರ್ಯಕ್ರಮದಡಿ ಒದಗಿಸಲಾಗುತ್ತದೆ.

ಈ ಉತ್ಕೃಷ್ಟತಾ ಕೇಂದ್ರವು ಉತ್ತರ ಕರ್ನಾಟಕದ 13 ಜಿಲ್ಲೆಗಳಿಗಾಗಿ ಪ್ರಾದೇಶಿಕ AI ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ. ಬೆಂಗಳೂರು ಕೇಂದ್ರೀಕೃತ ತಂತ್ರಜ್ಞಾನ ಪರಿಸರದ ಅಸಮತೋಲನ ನಿವಾರಿಸಿ, ಟಿಯರ್-2 ಮತ್ತು ಟಿಯರ್-3 ನಗರಗಳಲ್ಲಿ AI ಶಿಕ್ಷಣ, ಸಂಶೋಧನೆ, ನಾವೀನ್ಯತೆ ಹಾಗೂ ಉದ್ಯಮಶೀಲತೆಯನ್ನು ಉತ್ತೇಜಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಕೃಷಿ, ಆರೋಗ್ಯ, ಶಿಕ್ಷಣ, MSME, ಆಡಳಿತ ಸೇರಿದಂತೆ ವಿವಿಧ ಕ್ಷೇತ್ರಗಳ ಸಮಸ್ಯೆಗಳಿಗೆ AI ಆಧಾರಿತ ಪರಿಹಾರಗಳನ್ನು ರೂಪಿಸಲು ಈ ಕೇಂದ್ರ ನೆರವಾಗಲಿದೆ.

ಈ ಯೋಜನೆಯಡಿ AI ಅಭಿವೃದ್ಧಿ ಪ್ರಯೋಗಾಲಯಗಳು, ಉನ್ನತ ಗಣಕ ಸಂಪನ್ಮೂಲಗಳು, ಪ್ರೋಟೋಟೈಪ್ ಅಭಿವೃದ್ಧಿ, ಕೌಶಲ್ಯಾಭಿವೃದ್ಧಿ ತರಬೇತಿಗಳು, ನವೋದ್ಯಮಗಳಿಗೆ ಇನ್ಕ್ಯುಬೇಷನ್, ಸ್ಟಾರ್ಟಅಪ್ ಬೆಂಬಲ ಹಾಗೂ ಪ್ರಾದೇಶಿಕ ವಿಸ್ತರಣಾ ಕಾರ್ಯಕ್ರಮಗಳನ್ನು ಹಂತ ಹಂತವಾಗಿ ಜಾರಿಗೊಳಿಸಲಾಗುವುದು.

ಯೋಜನೆಯ ನಿರ್ವಹಣೆಗೆ "/IIIT Raichur ARIA - AI Research & Innovation Arena" ಎಂಬ ವಿಶೇಷ ಉದ್ದೇಶಿತ ಸಂಸ್ಥೆ (SPV) ರಚಿಸಲಾಗುವುದು. ಯೋಜನೆಯ ಅನುಷ್ಠಾನವು ಮೂರು ಹಂತಗಳಲ್ಲಿ ನಡೆಯಲಿದ್ದು, ಮೂಲಸೌಕರ್ಯ ನಿರ್ಮಾಣದಿಂದ ಆರಂಭಿಸಿ ನಾವೀನ್ಯತೆ, ಉದ್ಯಮಶೀಲತೆ ಮತ್ತು ದೀರ್ಘಕಾಲೀನ ಸ್ವಾವಲಂಬನೆಯತ್ತ ಕೊಂಡೊಯ್ಯಲಾಗುತ್ತದೆ.

ಈ ಯೋಜನೆಯ ಮೂಲಕ ರಾಯಚೂರು ಹಾಗೂ ಉತ್ತರ ಕರ್ನಾಟಕವನ್ನು ಕೃತಕ ಬುದ್ಧಿಮತ್ತೆ ಕ್ಷೇತ್ರದ ಪ್ರಮುಖ ಕೇಂದ್ರವನ್ನಾಗಿ ರೂಪಿಸುವುದರೊಂದಿಗೆ, ವಿದ್ಯಾರ್ಥಿಗಳು, ಸಂಶೋಧಕರು, ನವೋದ್ಯಮಿಗಳು ಮತ್ತು ಕೈಗಾರಿಕೆಗಳಿಗೆ ಜಾಗತಿಕ ಮಟ್ಟದ ಅವಕಾಶಗಳು ದೊರೆಯಲಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

# ತಾಯಿಯ ಹೆಸರಲ್ಲಿ ಒಂದು ವೃಕ್ಷ ಕಾರ್ಯಕ್ರಮ

## ಹೆಚ್ಚು ಗಿಡಗಳನ್ನು ಹಚ್ಚುವುದರ ಮೂಲಕ ಇತರೆ ಬಡಾವಣೆ ಜನರಿಗೆ ಮಾದರಿಯಾಗಲಿ: ರಾಜೇಶ ನಾಯಕ

ಧೈರ್ಯದ ದಾರಿ

**ರಾಯಚೂರು ಜುಲೈ 20:** ರಾಯಚೂರು ನಗರದ ಚಂದ್ರಬಂಡಾ ರಸ್ತೆಯಲ್ಲಿ ಬರುವ ಮಾರುತಿ ಟೌನ್‌ಶಿಪ್ ಬಡಾವಣೆಯ ಶ್ರೀಅಭಯ ಹಸ್ತ ಮಾರುತಿ ದೇವಸ್ಥಾನದ ಆವರದಲ್ಲಿ ತಾಯಿಯ ಹೆಸರಲ್ಲಿ ಒಂದು ವೃಕ್ಷ ಕಾರ್ಯಕ್ರಮಕ್ಕೆ ಅರಣ್ಯ ಇಲಾಖೆಯಿಂದ ಸೋಮವಾರ ರಂದು ನೆಡೆಯಿತು.ಶ್ರೀ ಅಭಯ ಹಸ್ತ ಮಾರುತಿ ದೇವಸ್ಥಾನ ಟ್ರಸ್ಟ್ ಮತ್ತು ಅರಣ್ಯ ಇಲಾಖೆಯ ಸಂಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ದೇವಸ್ಥಾನದ ಆವರಣದಲ್ಲಿ ಬಡಾವಣೆಯ ಜನರಿಂದ ವಿವಿಧ ತಳಿಗಳ ಸಸ್ಯೆಗಳನ್ನು ನೆಡಲಾಯಿತು.ಈ ವೇಳೆ ಅರಣ್ಯ ಇಲಾಖೆಯ ಅಧಿಕಾರಿ ರಾಜೇಶ ನಾಯಕ ಅವರು ಮಾತನಾಡಿ, ಮುಂಗಾರು ಆರಂಭವಾಗಿ ಒಂದುವರೆ ತಿಂಗಳಾದರು ಸಹಮಳೆ ಬಾರದೇ ಇರುವುದರಿಂದ ಯಾವುದೇ ಗಿಡಗಳನ್ನು ಹಚ್ಚಿಲ್ಲ. ಈಗ ಮಳೆಬಂದಿರುವುದರಿಂದ ಪ್ರಥಮವಾಗಿ ತಮ್ಮ ಬಡಾವಣೆಯಿಂದ್ದಲೇ ಗಿಡಗಳನ್ನು ನೆಡಲಾಗಿದೆ. ಈ ಕಾರ್ಯಕ್ರಮದಲ್ಲಿ ಬಡಾವಣೆಯ ಜನರು ಉತ್ಸಾಹದಿಂದ ಭಾಗವಹಿಸಿರುವುದು ಸಂತೋಷದಾಯಕವಾಗಿದೆ. ತಾಯಿಯ ಹೆಸರಲ್ಲಿ ಒಂದು ವೃಕ್ಷ ಕಾರ್ಯಕ್ರಮವು ಇನ್ನೊಂದು ಬಡಾವಣೆಯ ಜನರಿಗೆ ಮಾದರಿಯಾಗುವಂತೆ ಗೀಡಗಳನ್ನು ಸಂಕ್ಷಣೆ ಮಾಡಿ, ಘೋಷಿಸಬೇಕು ಎಂದು ಕರೆ ನೀಡಿದರು.

ಟ್ರಸ್ಟ್ನ ಉಪಾಧಕ್ಷರಾದ ವೆಂಕಟೇಶ ಮಾತನಾಡಿ, ಪ್ರತಿಯೊಬ್ಬರು ತಮ್ಮ ಮಕ್ಕಳ ಹುಟ್ಟುಹಬ್ಬವನ್ನು ಗೀಡಗಳನ್ನು ನೇಡುವುದರ ಮೂಲಕ ಮುಂದಿನ ಪೀಳಿಗೆ ಪರಿಸರದ ಬಗ್ಗೆ ಜಾಗೃತಿ



ಮೂಡಿಸಬೇಕು ಎಂದರು. ಶ್ರೀ ಅಭಯ ಹಸ್ತ ಮಾರುತಿ ದೇವಸ್ಥಾನ ಟ್ರಸ್ಟ್ ವತಿಯಿಂದ ಅರಣ್ಯ ಅಧಿಕಾರಿಗಳಾದ ರಾಜೇಶ ನಾಯಕ, ಯಲ್ಲಪ್ಪ, ಮೌನೇಶ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಶ್ರೀ ಅಭಯ ಹಸ್ತ ಮಾರುತಿ ದೇವಸ್ಥಾನ ಟ್ರಸ್ಟ್ ಗೌರವಾಧ್ಯಕ ಕಟ್ಟಾನರಸಯ್ಯ, ಅಧ್ಯಕ್ಷ ಬೂದೆಪ್ಪ, ಉಪಾಧ್ಯಕ್ಷ ವೆಂಕಟೇಶ, ಕಾರ್ಯದರ್ಶಿ ದೇವೇಂದ್ರಪ್ಪ, ಸಂಘಟನಾ ಕಾರ್ಯದರ್ಶಿ ಚನ್ನಬಸವಗೌಡ, ಸದಸ್ಯರಾದ ರಾಜಪ್ಪ, ಮಾರೆಪ್ಪ ಕಡಗಂದೊಡ್ಡಿ, ಬಡಾವಣೆಯ ಗಿರೀಶ್, ಅನಂತ ಕುಮಾರ ರೆಡ್ಡಿ ಬಡಾವಣೆಯ ಮಹಿಳೆಯರು ಸೇರಿದಂತೆ ಇತರರು ಇದ್ದರು.

# ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಿವಿಧ ಕಾರ್ಯಕ್ರಮಗಳಿಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 20:** ರಾಯಚೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 2026ನೇ ಸಾಲಿನ ಕ್ರಿಯಾಯೋಜನೆಯಂತೆ ಸಾಂಸ್ಕೃತಿಕ ಸೌರಭ, ಯುವ ಸೌರಭ ಮತ್ತು ಚಿಗುರು ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಅಯೋಜಿಸುತ್ತಿರುವ ಹಿನ್ನಲೆಯಲ್ಲಿ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಾಂಸ್ಕೃತಿಕ ಸೌರಭ ಕಾರ್ಯಕ್ರಮ: ರಾಯಚೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2026–27ನೇ ಸಾಲಿನಲ್ಲಿ ಸಾಂಸ್ಕೃತಿಕ ಸೌರಭ ಕಾರ್ಯಕ್ರಮವನ್ನು ಜಿಲ್ಲಾ ಮಟ್ಟದಲ್ಲಿ ಏರ್ಪಡಿಸಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಆಕಾಶವಾಣಿಯ ಎ, 'ಎ–ಹೈ, ಬಿ–ಬಿಹೈ, 'ಎ' ಗ್ರೇಡ್ ಕಲಾವಿದರು ಹಾಗೂ ಸರ್ಕಾರದಿಂದ ಕೊಡ ಮಾಡುವ ಪ್ರಶಸ್ತಿ ಪುರಸ್ಕೃತ ಕಲಾವಿದರಾಗಿರಬೇಕು. ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸುವ ಕಲಾವಿದರು ಶಾಸ್ತ್ರೀಯ ಸಂಗೀತ/ ಕರ್ನಾಟಕ / ಹಿಂದೂಸ್ಥಾನಿ / ಗಾಯನ ವಾದ್ಯ ಸಂಗೀತ/ಸುಗಮ ಸಂಗೀತ / ವಚನ ಸಂಗೀತ / ಜನಪದ ಗೀತೆಗಳು / ಸಮೂಹ ನೃತ್ಯ / ನೃತ್ಯ ರೂಪಕ / ಜನಪದ ಮೂಡಲವಾಯ /ಬಯಲಾಟ / ಗೊಂಬೆಮೇಳ ಮಾಡುವ ಕಲಾವಿದರು ಸ್ವ–ವಿವರ ಹಾಗೂ ತಂಡದ ವಿವರಗಳನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ ಜುಲೈ 26 ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲೆಗೆ ತಮ್ಮ ಸ್ವ–ವಿವರವನ್ನು ನೀಡಬಹುದಾಗಿದೆ.

ಯುವ ಸೌರಭ ಕಾರ್ಯಕ್ರಮ: 2026–27ನೇ ಸಾಲಿನಲ್ಲಿ "ಯುವ ಸೌರಭ" ಕಾರ್ಯಕ್ರಮವನ್ನು ಜಿಲ್ಲಾ ಮಟ್ಟದಲ್ಲಿ ಏರ್ಪಡಿಸಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಸುಗಮ ಸಂಗೀತ/ ವಚನ ಸಂಗೀತ/ ಜನಪದ ಗೀತೆಗಳು/ ಸಮೂಹ ನೃತ್ಯ/ ನೃತ್ಯ ರೂಪಕ) ಜನಪದ ಪ್ರದರ್ಶನ ಕಲಾತಂಡ/ ನಾಟಕ/ ಯಕ್ಷಗಾನ/ ಮೂಡಲಪಾಯ/ ಬಯಲಾಟ/ ಗೊಂಬೆಮೇಳ ಮಾಡುವ ಕಲಾವಿದರು ಸ್ವ–ವಿವರ ಹಾಗೂ ತಂಡದ ವಿವರಗಳನ್ನು ಪಾಸ್ ಪೋರ್ಟ್ ಸೈಜ್ ಭಾವಚಿತ್ರದೊಂದಿಗೆ 15 ರಿಂದ 30 ವರ್ಷದ ವಯೋಮಾನದ ಪ್ರತಿಭಾವಂತ ಯುವ ಕಾಲೇಜು ವಿಧ್ಯಾರ್ಥಿಗಳು ಭಾಗವಹಿಸಬಹುದಾಗಿದ್ದು, ವಯಸ್ಸಿನ ದೃಢೀಕರಣದೊಂದಿಗೆ ಜುಲೈ–26 ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲೆಗೆ ತಮ್ಮ ಸ್ವ–ವಿವರವನ್ನು ನೀಡಬಹುದಾಗಿದೆ.

ಚಿಗುರು ಕಾರ್ಯಕ್ರಮ: 2026–27ನೇ ಸಾಲಿನಲ್ಲಿ ಚಿಗುರು ಕಾರ್ಯಕ್ರಮವನ್ನು ಜಿಲ್ಲಾ ಮಟ್ಟದಲ್ಲಿ ಏರ್ಪಡಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಶಾಸ್ತ್ರೀಯ ಸಂಗೀತ/ ಕರ್ನಾಟಕ/ ಹಿಂದೂಸ್ಥಾನಿ/ ಗಾಯನ ವಾದ್ಯ ಸಂಗೀತ/ ಸುಗಮ ಸಂಗೀತ/ ವಚನ ಸಂಗೀತ/ ಜನಪದ ಗೀತೆಗಳು/ ಸಮೂಹ ನೃತ್ಯ/ ನೃತ್ಯ ರೂಪಕ/ ನಾಟಕ/ ಯಕ್ಷಗಾನ/ ಮೂಡಲಪಾಯ/ ಬಯಲಾಟ/ ಗೊಂಬೆಮೇಳ ಹಾಗೂ ಏಕಪಾತ್ರಾಭಿನಯ ಮಾಡುವ ಕಲಾವಿದರು 8 ರಿಂದ 14 ವರ್ಷದ ವಯೋಮಾನದ ಪ್ರತಿಭಾವಂತ ಮಕ್ಕಳು ಭಾಗವಹಿಸಬಹುದಾಗಿದ್ದು, ವಯಸ್ಸಿನ ದೃಢೀಕರಣ ಪತ್ರ ಹಾಗೂ ಪ್ರದರ್ಶಿಸಲಿರುವ ಕಲೆಯ ವಿವರವನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ ಶಾಲಾ ಮುಖ್ಯಸ್ಥರಿಂದ ದೃಢೀಕರಿಸಿ ಜುಲೈ–26ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲೆಗೆ ತಮ್ಮ ಸ್ವ–ವಿವರವನ್ನು ಸಲ್ಲಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ಜುಲೈ 23ರಂದು ನೇರ ಸಂದರ್ಶನ

**ರಾಯಚೂರು ಜುಲೈ 20:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಜುಲೈ 23 ರಂದು ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532–231684, 9008211750, 8197930236ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೋಟಗಾರಿಕೆ ಇಲಾಖೆಯಿಂದ ವಿವಿಧ ಬೆಳೆ ವಿಮೆಗೆ ಅರ್ಜಿ ಸಲ್ಲಿಸಲು ಜುಲೈ 31ಕೊನೆಯ ದಿನ

**ರಾಯಚೂರು ಜುಲೈ 20:** ರಾಜ್ಯ ಸರ್ಕಾರದ ನಡುವಳಿಯಂತೆ ಮರುವಿನ್ಯಾಸಗೊಳಿಸಿದ ಹವಾಮಾನ ಅಧಾರಿತ ಬೆಳೆ ವಿಮೆ (ಆರ್.ಡ್ಲೂ.ಬಿ.ಸಿ.ಐ.ಎಸ್) ಯೋಜನೆ–2026ರ ಮುಂಗಾರು ಹಂಗಾಮಿನಲ್ಲಿ ರಾಯಚೂರು ಜಿಲ್ಲೆಯ ಅಧಿಸೂಚಿತ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ನೀರಾವರಿ ಹಸಿ ಮೆಣಸಿನಕಾಯಿ, ದಾಳಿಂಬೆ ಹಾಗೂ ಮಾವು ಬೆಳೆಗಾರರಿಗೆ ವಿಮಾ ಕಂತು ಕಟ್ಟಲು ಜುಲೈ 31ರವರೆಗೆ ಅವಕಾಶ ನೀಡಲಾಗಿದೆ.

ಹಸಿ ಮೆಣಸಿನಕಾಯಿ (ನೀ.) ಬೆಳೆಗೆ ಪ್ರತಿ ಹೆಕ್ಟರ್ ವಿಮಾ ಮೊತ್ತ 71000 ರೂ.ಗಳಿದ್ದು, ವಿಮಾ ಕಂತಿನ ಮೊತ್ತ 3550 ರೂ.ಗಳಿರುತ್ತದೆ. ದಾಳಿಂಬೆ ಬೆಳೆಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 127000 ರೂ.ಗಳಾಗಿದ್ದು, ವಿಮಾ ಕಂತಿನ ಮೊತ್ತ 6350 ರೂ.ಗಳಿರುತ್ತದೆ ಮತ್ತು ಮಾವು ಬೆಳೆಗಾರರಿಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 80000 ರೂ.ಗಳಾಗಿದ್ದು, ವಿಮಾ ಕಂತಿನ ಮೊತ್ತ 4000 ರೂ.ಗಳಿರುತ್ತದೆ.

ಬೆಳೆ ಸಾಲ ಪಡೆದಿರುವ ಮತ್ತು ಪಡೆಯದ ರೈತರು ವಿಮೆ ಕಂತು ಕಟ್ಟಲು ಹತ್ತಿರದ ರಾಷ್ಟ್ರೀಯಕೃತ ಬ್ಯಾಂಕುಗಳಿಗೆ ಅಥವಾ ಹತ್ತಿರದ ಕಂಪ್ಯೂಟರ್ ಸೇವಾ ಕೇಂದ್ರಗಳಲ್ಲಿ ನಿಗಧಿತ ಅರ್ಜಿಗಳೊಂದಿಗೆ ಭೂ ದಾಖಲೆಗಳಾದ ಪಹಣಿ, ಬ್ಯಾಂಕ್ ಪಾಸ್ ಪುಸ್ತಕ, ಆಧಾರ್ ಕಾರ್ಡ್ ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕು ತೋಟಗಾರಿಕೆ ಇಲಾಖೆ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರ ಹಾಗೂ ಸಮೀಪದ ಯಾವುದೇ ಬ್ಯಾಂಕ್‌ಗಳು, ಸಿಎಸ್‌ಸಿ ಕೇಂದ್ರಗಳಿಗೆ ಅಥವಾ ಗ್ರಾಮ್ ಒನ್ ಕೇಂದ್ರಗಳಿಗೆ ಭೇಟಿ ನೀಡಿ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮ ಪಂಚಾಯತ ಮತ್ತು ಬೆಳೆಗಳ ಬಗ್ಗೆ ಮಾಹಿತಿ ಪಡೆದುಕೊಂಡು ವಿಮೆಗಾಗಿ ಅರ್ಜಿ ಸಲ್ಲಿಸುವಂತೆ ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಬುರಗಿ ಜಿಲ್ಲೆಯಲ್ಲಿ 25 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿಗೆಸಚಿವ ಸಂಪುಟದ ಅನುಮೋದನೆ: ಗೃಹ ಸಚಿವ ಪ್ರಿಯಾಂಕ್ ಖರ್ಗೆ



**ಬೆಂಗಳೂರು,ಜು.20–**ಕಲಬುರಗಿ ಜಿಲ್ಲೆಯ ಜೇವರ್ಗಿ ವಿಧಾನಸಭಾ ಕ್ಷೇತ್ರದಲ್ಲಿ ರಸ್ತೆ ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ 25 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿರುವುದು ಸಂತಸದ ವಿಷಯ ಎಂದು ಗೃಹ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಯೋಜನೆಯಡಿ ಒಟ್ಟು 20.65 ಕಿಲೋಮೀಟರ್ ರಸ್ತೆ ಅಭಿವೃದ್ಧಿಪಡಿಸಲಾಗುತ್ತಿದ್ದು, ರಾಜ್ಯ ಹೆದ್ದಾರಿ–156ರ ಕಟ್ಟಿಸಂಗವಿ–ಯನಗುಂಟಿ–ನರಿಬೋಳ–ಮಾಲ್–ಕೆ ಕ್ರಾಸ್ ಮಾರ್ಗದ 9.045 ಕಿಲೋಮೀಟರ್ ರಸ್ತೆ ಹಾಗೂ ಕೆಲ್ಲೂರು–ಆಂದೋಲ ಜಿಲ್ಲಾ ಮುಖ್ಯ ರಸ್ತೆಯ 3.900 ಕಿಲೋಮೀಟರ್ ರಸ್ತೆ ಅಭಿವೃದ್ಧಿಪಡಿಸಲಾಗುವುದು. ಪ್ರಸ್ತುತ 3.75 ಮೀಟರ್ ಅಗಲವಿರುವ ರಸ್ತೆಯನ್ನು ಆಯ್ದ ಭಾಗಗಳಲ್ಲಿ 5.5 ಮೀಟರ್ ಅಗಲಕ್ಕೆ ವಿಸ್ತರಿಸಿ ಗುಣಮಟ್ಟದ ರಸ್ತೆ ನಿರ್ಮಿಸಲಾಗುತ್ತದೆ ಎಂದು ಅವರು ಹೇಳಿದರು.

"ಉತ್ತಮ ರಸ್ತೆ ಎಂದರೆ ಅದು ಕೇವಲ ಸಂಚಾರದ ಸೌಲಭ್ಯವಲ್ಲ; ಅದು ಗ್ರಾಮೀಣಾಭಿವೃದ್ಧಿಯ ಬೆನ್ನೆಲುಬು. ಗುಣಮಟ್ಟದ ರಸ್ತೆ ನಿರ್ಮಾಣದಿಂದ ಜನರ ಜೀವನಮಟ್ಟ ಸುಧಾರಿಸುತ್ತದೆ, ರೈತರಿಗೆ ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗುತ್ತದೆ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಸುರಕ್ಷಿತ ಮತ್ತು ವೇಗವಾದ ಸಂಚಾರದ ವ್ಯವಸ್ಥೆ ದೊರೆಯುತ್ತದೆ. ಇದು ಸ್ಥಳೀಯ ಆರ್ಥಿಕ ಚಟುವಟಿಕೆಗಳಿಗೂ ಹೊಸ ಚೈತನ್ಯ ನೀಡಲಿದೆ" ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ರಸ್ತೆ ಅಭಿವೃದ್ಧಿಯಿಂದ ಕಡಕೋಳ, ಕಟ್ಟಿಸಂಗವಿ, ನರಿಬೋಳ, ಕೆಲ್ಲೂರು ಹಾಗೂ ಆಂದೋಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಜನರಿಗೆ ಉತ್ತಮ ಸಂಪರ್ಕ ವ್ಯವಸ್ಥೆ ದೊರೆಯಲಿದ್ದು, ಈ ಭಾಗದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಹೊಸ ವೇಗ ಸಿಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

"ರಾಜ್ಯದ ಎಲ್ಲ ಭಾಗಗಳಿಗೂ ಸಮಾನ ಅಭಿವೃದ್ಧಿ ತಲುಪಿಸುವುದು ನಮ್ಮ ಸರ್ಕಾರದ ಬದ್ಧತೆಯಾಗಿದೆ. ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯವನ್ನು ಇನ್ನಷ್ಟು ಸದೃಢಗೊಳಿಸುವ ಕಾರ್ಯ ಮುಂದುವರಿಯಲಿದೆ" ಎಂದು ಸಚಿವರು ತಿಳಿಸಿದ್ದಾರೆ

# ಕೆಕೆಸಿಸಿಐ ಡೈಮಂಡ್ ಜುಬಿಲಿ ಬಿಸಿನೆಸ್ ಇಂಕ್ಯುಬೇಶನ್ ಹಾಗೂ ತರಬೇತಿ ಕೇಂದ್ರದ ಭೂಮಿ ಪೂಜೆ



**ಕಲಬುರಗಿ,ಜು.20–**ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ತನ್ನ ವಜ್ರಮಹೋತ್ಸವದ ಅಂಗವಾಗಿ ನಿರ್ಮಿಸಲಾಗುತ್ತಿರುವ ಕೆಕೆಸಿಸಿಐ ಡೈಮಂಡ್ ಜುಬಿಲಿ ಬಿಸಿನೆಸ್ ಇಂಕ್ಯುಬೇಶನ್ ಹಾಗೂ ತರಬೇತಿ ಕೇಂದ್ರದ ಭೂಮಿ ಪೂಜೆ ಹಾಗೂ ಶಂಕುಸ್ಥಾಪನೆ ಕಾರ್ಯಕ್ರಮವನ್ನು ಭಾನುವಾರ ದರಿಯಾಪುರ–ಕೊಟ್ನೂರಿನ, ಝೆಸ್ಟ್ ಕ್ಲಬ್ ಹಿಂಭಾಗದ ಔಷಧ ಭವನ ಸಮೀಪದ ಪ್ರಸ್ತಾವಿತ ಜಾಗದಲ್ಲಿ ಅತ್ಯಂತ ವಿಜೃಂಭಣೆಯಿಂದ ನೆರವೇರಿಸಲಾಯಿತು. ಕಾರ್ಯಕ್ರಮವು ಮಕ್ತಂಪುರ ಗದ್ದುಗಿ ಮಠದ ಚಾರಲಿಂಗ ಮಹಾಸ್ವಾಮಿಗಳ ದಿವ್ಯ ಆಶೀರ್ವಾದದೊಂದಿಗೆ ಆರಂಭಗೊಂಡಿತು. ಮಹಾಸ್ವಾಮಿಗಳು ನೂತನ ಕಟ್ಟಡವು ಯಶಸ್ವಿಯಾಗಿ ನಿರ್ಮಾಣಗೊಂಡು ಈ ಭಾಗದ ಉದ್ಯಮ, ವ್ಯಾಪಾರ ಹಾಗೂ ಯುವ ಉದ್ಯಮಿಗಳ ಬೆಳವಣಿಗೆಗೆ ಕೇಂದ್ರಬಿಂದುವಾಗಲಿ ಎಂದು ಹಾರೈಸಿದರು.

ಶಂಕುಸ್ಥಾಪನೆಯನ್ನು ಕಲಬುರಗಿ ದಕ್ಷಿಣ ಶಾಸಕ ಅಲ್ಲಂಪ್ರಭು ಪಾಟೀಲ, ಕಲಬುರಗಿ ಗ್ರಾಮೀಣ ಶಾಸಕ ಬಸವರಾಜ ಮತ್ತಿಮುಡ್ ಹಾಗೂ ವಿಧಾನ ಪರಿಷತ್ ಸದಸ್ಯ ಹಾಗೂ ಎಸ್‌ಕೆಇಎಸ್ ಅಧ್ಯಕ್ಷರಾದ ಶಶೀಲ ಜಿ.

ನಮೋಶಿ ಅವರು ಸಂಯುಕ್ತವಾಗಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆಕೆಸಿಸಿಐ ಅಧ್ಯಕ್ಷ ಶರಣಬಸಪ್ಪ ಎಂ.ಪಪ್ಪಾ ಅವರು, ಸಂಸ್ಥೆಯ 60ನೇ ವರ್ಷದ ಸ್ಮರಣಾರ್ಥ ನಿರ್ಮಾಣವಾಗುತ್ತಿರುವ ಈ ಡೈಮಂಡ್ ಜುಬಿಲಿ ಬಿಸಿನೆಸ್ ಇಂಕ್ಯುಬೇಶನ್ ಹಾಗೂ ತರಬೇತಿ ಕೇಂದ್ರವು ಉದ್ಯಮಶೀಲತೆ, ಸ್ಟಾರ್ಟಅಪ್‌ಗಳು, ಕೌಶಲ್ಯಾಭಿವೃದ್ಧಿ, ನವೋದ್ಯಮ, ಬಿಸಿನೆಸ್ ಇಂಕ್ಯುಬೇಶನ್ ಹಾಗೂ ಸಾಮರ್ಥ್ಯ ವೃದ್ಧಿಗೆ ಮಹತ್ವದ ವೇದಿಕೆಯಾಗಲಿದೆ ಎಂದು ಹೇಳಿದರು. ಈ ಕೇಂದ್ರವು ಕಲ್ಯಾಣ ಕರ್ನಾಟಕ ಭಾಗದ ಯುವಕರು, ಉದ್ಯಮಿಗಳು ಹಾಗೂ ಎಂಎಸ್‌ಎಂಇಗಳಿಗೆ ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕಲಬುರಗಿ ದಕ್ಷಿಣ ಶಾಸಕ ಅಲ್ಲಂಪ್ರಭು ಪಾಟೀಲ ಅವರು ಮಾತನಾಡಿ, ಕೆಕೆಸಿಸಿಐ ಕೈಗೊಂಡಿರುವ ಈ ದೂರದೃಷ್ಟಿಯ ಯೋಜನೆಯನ್ನು ಶ್ಲಾಘಿಸಿ, ಸಂಸ್ಥೆಯ ಅಭಿವೃದ್ಧಿ ಕಾರ್ಯಗಳಿಗೆ ತಮ್ಮ ಸಂಪೂರ್ಣ ಸಹಕಾರ ಮುಂದುವರಿಯಲಿದೆ ಎಂದು ಭರವಸೆ ನೀಡಿದರು.

ಚಾರಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಈ ಕೇಂದ್ರವು ಜ್ಞಾನ, ಉದ್ಯಮಶೀಲತೆ ಹಾಗೂ ಸಮೃದ್ಧಿಯ ಪ್ರತೀಕವಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಬೇಕಾಗಿದ್ದ ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಅವರು ಅನಿವಾರ್ಯ ಕಾರಣಗಳಿಂದ ಕಾರ್ಯಕ್ರಮಕ್ಕೆ ಆಗಮಿಸಲು ಸಾಧ್ಯವಾಗಲಿಲ್ಲ. ಆದರೆ ದೂರವಾಣಿ ಮೂಲಕ ಕೆಕೆಸಿಸಿಐಗೆ ಶುಭಾಶಯಗಳನ್ನು ತಿಳಿಸಿ, ಈ ಮಹತ್ವದ ಯೋಜನೆಗೆ ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಕೆಕೆಸಿಸಿಐ ಮಾಜಿ ಅಧ್ಯಕ್ಷ ಉಮಾಕಾಂತ ನಿಗೂಡಗಿ, ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ ಎನ್. ಪಾಟೀಲ, ಸರಾಫ್ ಬಜಾರ್ ಅಸೋಸಿಯೇಷನ್ ಅಧ್ಯಕ್ಷ ರಾಘವೇಂದ್ರ ಮೈಲಾಪೂರ,

ದಲ್ ಮಿಲ್ ಅಸೋಸಿಯೇಷನ್ ಅಧ್ಯಕ್ಷ ಚಂದ್ರಕಾಂತ ಕೋಬಾಳ, ಗ್ರೇನ್ಸ್ &ಚಿಟರಿ; ಸೀಡ್ಸ್ ಮಚರ್‌ಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ಸಂತೋಷ್ ಲಂಗರ್, ಹಿರಿಯ ಕಾಂಗ್ರೆಸ್ ಮುಖಂಡ ನೀಲಕಂಠರಾವ್ ಮೂಲಗೆ, ಕಪನೂರ್ ಇಂಡಸ್ಟ್ರಿಯಲ್ ಎಸ್ಟೇಟ್ ಅಸೋಸಿಯೇಷನ್ ಅಧ್ಯಕ್ಷ ರವೀಂದ್ರ ಮುಕ್ಕಾ, ರೈಸ್ &ಚಿಟರಿ; ಕಿರಾಣಿ ಮಚರ್‌ಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ರವೀಂದ್ರ ಮಡಮಶೆಟ್ಟಿ, ಫಾರ್ಮಾ ಅಸೋಸಿಯೇಷನ್ ಕಾರ್ಯದರ್ಶಿ ರವೀಂದ್ರ ಜೋಶಿ, ಕಾಸಿಯಾ ಕೌನ್ಸಿಲ್ ಸದಸ್ಯ ಭೀಮಾಶಂಕರ ಪಾಟೀಲ, ನಂದಿಕೋಳ ಸ್ವಾಮಿ, ಬಿಜೆಪಿ ಹಿರಿಯ ಮುಖಂಡ ರಾಜುಗೌಡ ನಾಗನಹಳ್ಳಿ, ರಾಜು ಭೀಮಳ್ಳಿ, ವಿಷ್ಣುದಾಸ್ ತಪಾಡಿಯಾ,

ಡಾ.ಶರಣಬಸಪ್ಪ ಹರವಾಳ, ಶಿವಶರಣಪ್ಪ ಸೀರಿ, ಸುರೇಶ್ ಬುಲ್ಬುಲೆ, ಬಸವರಾಜ ಜೋಗೂರ, ಶರಣಬಸಪ್ಪ ಮಚ್ಚೆಟ್ಟಿ, ಮಹೇಶ್ ಸಾಲಗಾರ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ಯೋಜನೆ

ಯಶಸ್ವಿಯಾಗಲೆಂದು ಶುಭ ಹಾರೈಸಿದರು.

ಈ ಕಾರ್ಯಕ್ರಮವು ಕೆಕೆಸಿಸಿಐ ಅಧ್ಯಕ್ಷ ಶರಣಬಸಪ್ಪ ಎಂ.ಪಪ್ಪಾ ಹಾಗೂ ಗೌರವ ಕಾರ್ಯದರ್ಶಿ ಶಿವರಾಜ್ ವಿ. ಇಂಗಿನಶೆಟ್ಟಿ ಅವರ ನೇತೃತ್ವದಲ್ಲಿ ನಡೆಯಿತು. ಉಪಾಧ್ಯಕ್ಷ ಕೇದಾರ ರಾಘೋಜಿ, ಜಂಟಿ ಕಾರ್ಯದರ್ಶಿ

ಗಿರೀಶ್ ಅನಕಲ್, ಖಜಾಂಚಿ ಉತ್ತಮ್ ಬಜಾಜ್, ಬಿಲ್ಡಿಂಗ್ &ಚಿಟರಿ; ಎಸ್ಟೇಟ್ ಉಪಸಮಿತಿ ಅಧ್ಯಕ್ಷ ಸಂತೋಷ್ ಸುರೇಶ್ ನಂದ್ಯಾಳ್, ಮಂಜುನಾಥ ಜೇವರ್ಗಿ, ಕೆಕೆಸಿಸಿಐ 2025–27ರ ಆಡಳಿತ ಮಂಡಳಿಯ

ಸದಸ್ಯರು, ವಿವಿಧ ಸಂಯೋಜಿತ ವ್ಯಾಪಾರ ಸಂಘಗಳ ಪ್ರತಿನಿಧಿಗಳು, ಕೈಗಾರಿಕೋದ್ಯಮಿಗಳು, ಉದ್ಯಮಿಗಳು, ವ್ಯಾಪಾರಸ್ಥರು ಹಾಗೂ ಅಪಾರ ಸಂಖ್ಯೆಯ ಕೆಕೆಸಿಸಿಐ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅದನ್ನು ಯಶಸ್ವಿಗೊಳಿಸಿದರು.

ಪ್ರಸ್ತಾವಿತ ಕೆಕೆಸಿಸಿಐ ಡೈಮಂಡ್ ಜುಬಿಲಿ ಬಿಸಿನೆಸ್ ಇಂಕ್ಯುಬೇಶನ್ ಹಾಗೂ ತರಬೇತಿ ಕೇಂದ್ರವು ಉದ್ಯಮಶೀಲತೆ, ಸ್ಟಾರ್ಟಅಪ್ ಇಂಕ್ಯುಬೇಶನ್, ಕೌಶಲ್ಯಾಭಿವೃದ್ಧಿ ಹಾಗೂ ಉದ್ಯಮ ಬೆಂಬಲ ಸೇವೆಗಳನ್ನು ಉತ್ತೇಜಿಸುವ ಮೂಲಕ ಕಲ್ಯಾಣ ಕರ್ನಾಟಕ ಭಾಗದ ಕೈಗಾರಿಕಾ ಹಾಗೂ ಆರ್ಥಿಕ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುವ ಪ್ರತಿಷ್ಠಿತ ಕೇಂದ್ರವಾಗಿ ರೂಪುಗೊಳ್ಳಲಿದೆ.

# ನೀಟ್ ಆವಾಂತರ ಖಂಡಿಸಿ ನಡೆಯುತ್ತಿರುವ ಪಾರ್ಲಿಮೆಂಟ್ ಚಲೋ ಹೋರಾಟಕ್ಕೆ ಎಐಡಿಎಸ್‌ಓ ಬೆಂಬಲ



**ಯಾದಗಿರಿ,ಜು.20–**ನೀಟ್ ಪರೀಕ್ಷಾ ಅಕ್ರಮಗಳ ವಿರುದ್ಧ ಹೊಸ ದಿಲ್ಲಿಯಲ್ಲಿ ಶಾಂತಿಯುತ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಪರಿಸರ ಹೋರಾಟಗಾರ ಸೋನಂ ವಾಂಗ್ಚುಕ್ ಹಾಗೂ ಇತರ ಹೋರಾಟಗಾರರನ್ನು ಪೊಲೀಸರು ಬಲವಂತವಾಗಿ ಬಂಧಿಸಿರುವ ಕ್ರಮ ಖಂಡಿಸಿ ಹಾಗೂ ಪಾರ್ಲಿಮೆಂಟ್ ಚಲೋ ಹೋರಾಟವನ್ನು ಬೆಂಬಲಿಸಿ ಎಐಡಿಎಸ್‌ಓ ವತಿಯಿಂದ ನೇತಾಜಿ ಸುಭಾಷ್ ವೃತ್ತದ ಬಳಿ ಇಂದು ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಸಂಘಟನೆಯ ಜಿಲ್ಲಾ ಸಂಚಾಲಕಿ ಶಿಲ್ಪಾ ಬಿ ಕೆ ಮಾತನಾಡಿ, ಕೇಂದ್ರ ಸರ್ಕಾರ ಹಾಗೂ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನಡೆಸಿದ ಪ್ರಮುಖ ಪರೀಕ್ಷೆಗಳಲ್ಲಿ ನಡೆದಿರುವ ಅಕ್ರಮಗಳು ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯವನ್ನು ಕತ್ತಲೆಗೆ ದೂಡಿವೆ. ಪರೀಕ್ಷೆ ರದ್ದಾದ ಕೇವಲ ಒಂದೇ ತಿಂಗಳ ಅವಧಿಯಲ್ಲಿ ದೇಶಾದ್ಯಂತ 23 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಷ್ಟಾದರೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದಾರೆ. ಇಂತಹ ನ್ಯಾಯಯುತ ಬೇಡಿಕೆಗಳನ್ನಿಟ್ಟುಕೊಂಡು ನಡೆಯುತ್ತಿರುವ ಈ ಹೋರಾಟವನ್ನು ಕೇಂದ್ರ ಸರ್ಕಾರ ಪೊಲೀಸರ ಲಾಠಿಚಾರ್ಜ್ ಮೂಲಕ ದಮನಕಾರಿಯಾಗಿ ಹತ್ತಿಕ್ಕಲು ಪ್ರಯತ್ನಿಸುತ್ತಿರುವುದು ಅತ್ಯಂತ ಖಂಡನೀಯ ಎಂದರು.

ಸೋನಂ ವಾಂಗ್ಚುಕ್ ಉಪವಾಸ ಸತ್ಯಾಗ್ರಹ 22 ನೇ ದಿನಕ್ಕೆ ಕಾಲಿಟ್ಟಿದ್ದು, ಅವರ ಆರೋಗ್ಯ ತೀರಾ ಹದಗೆಟ್ಟಿದೆ. ಆದರೂ ಕೇಂದ್ರ ಸರಕಾರ ಅವರೊಂದಿಗೆ ಯಾವುದೇ ಪ್ರಜಾತಾಂತ್ರಿಕ ಸಂವಾದ ನಡೆಸದೆ, ದಮನಕಾರಿ ನೀತಿ ಅನುಸರಿಸುತ್ತಿರುವುದು ಪ್ರಜಾಪ್ರಭುತ್ವಕ್ಕೆ ಬಗೆದ ದ್ರೋಹ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ತುಳಜಾರಾಮ್ ರವರು ಮಾತನಾಡಿ, ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವುದು ವ್ಯವಸ್ಥೆಯ ವೈಫಲ್ಯವಲ್ಲ, ಶಿಕ್ಷಣ ಮಂತ್ರಿಗಳ ಬೇಜವಾಬ್ದಾರಿತನವಾಗಿದೆ. ಲಕ್ಷಾಂತರ ಜನರು ಬೀದಿಗಿಳಿದು ನಿರಂತರ ಹೋರಾಟ ಮಾಡುತ್ತಿದ್ದರೂ, ಕಿವಿಗೊಡದ ಕೇಂದ್ರ ಸರ್ಕಾರ, ತನ್ನ ಉದ್ದಟತನ ಪ್ರದರ್ಶಿಸುತ್ತ,ನೊಂದವರಿಗೆ ನ್ಯಾಯ ಕೊಡಿಸದೇ ಮೌನವಾಗಿದೆ ಇದು ಹೀಗೆ ಮುಂದುವರಿದರೆ ಇಡೀ ದೇಶದಾದ್ಯಂತ ಹೋರಾಟ ಬುಗಿಲೇಳಲಿದೆ ಎಂದರು.

ಸೋನಂ ವಾಂಗ್ಚುಕ್ ಮತ್ತು ಇತರ ಸತ್ಯಾಗ್ರಹಿಗಳೊಂದಿಗೆ ಕೇಂದ್ರ ಸರ್ಕಾರ ಕೂಡಲೇ ಪ್ರಜಾಸಾತ್ತಾತ್ಮಕ ಚರ್ಚೆ ಆರಂಭಿಸಬೇಕು. ಪರೀಕ್ಷಾ ಅಕ್ರಮದ ಹೊಣೆ ಹೊತ್ತು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಎಐಡಿಎಸ್‌ಓ ಸದಸ್ಯರಾದ, ರಂಜಿತಾ ನಾಗರಾಜ್, ಶ್ರೀಶೈಲ್, ಭಾಗ್ಯಶ್ರೀ, ರೋಜಾ, ದೇವೀಂದ್ರಮ್ಮ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ವ್ಯಕ್ತಿತ್ವ, ಸೇವಾ ಮನೋಭಾವ, ಕಠಿಣ ಪರಿಶ್ರಮದಿಂದ ಬೆಂಕಿಯಲ್ಲಿ ಅರಳಿದ ಹೂವಾದ ಮಲ್ಲಿಕಾರ್ಜುನ ಖರ್ಗೆ



ಡಾ|| ಆನಂದಕುಮಾರ್
ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರದ ಉಸ್ತುವಾರಿಗಳು, ಎಐಸಿಸಿ ಪರಿಶಿಷ್ಟ ವಿಭಾಗ, ನವದೆಹಲಿ.

**ಬೆಂಗಳೂರು, ಜು. 20–** ಭಾರತೀಯ ರಾಜಕೀಯದಲ್ಲಿ ಸರಳತೆ, ಹೋರಾಟ ಮತ್ತು ಸಾಮಾಜಿಕ ನ್ಯಾಯದ ಪ್ರತೀಕವಾಗಿ ಗುರುತಿಸಿಕೊಂಡಿರುವ ಮಲ್ಲಿಕಾರ್ಜುನ ಖರ್ಗೆ ಅವರ ಜೀವನ ಒಂದು ಸ್ಫೂರ್ತಿದಾಯಕ ಪಯಣ. ಬಾಲ್ಯದಲ್ಲಿ ಎದುರಿಸಿದ ಕಷ್ಟಗಳು, ಸಾಮಾಜಿಕ ಅಸಮಾನತೆ, ಆರ್ಥಿಕ ಸಮಸ್ಯೆಗಳು ಹಾಗೂ ರಾಜಕೀಯ ಸವಾಲುಗಳ ನಡುವೆಯೂ ಅವರು ತಮ್ಮ ಧೈರ್ಯ, ಪರಿಶ್ರಮ ಮತ್ತು ಬದ್ಧತೆಯಿಂದ ದೇಶದ ಅತ್ಯುನ್ನತ ರಾಜಕೀಯ ನಾಯಕರಲ್ಲಿ ಒಬ್ಬರಾಗಿ ಹೊರಹೊಮ್ಮಿದ್ದಾರೆ.

ಬೀದರ್ ಜಿಲ್ಲೆ ಭಾಲ್ಕಿ ತಾಲೂಕು ವರವಟ್ಟಿ ಎಂಬ ಕುಗ್ರಾಮದ ಭೂ ರಹಿತ ಕೃಷಿ ಕೂಲಿ ಕಾರ್ಮಿಕ ಮಾಪಣ್ಣನ ಮನೆಯಲ್ಲಿ ಖರ್ಗೆ ಹುಟ್ಟಿದರು. ಒಂದು ಅಂಕಣದ ತೆಂಗಿನ ಸೂರಿನ ಆ ಮನೆ ಈಗಲೂ ಅಲ್ಲಿದೆ. ತನ್ನ ಮೊದಲ ಹೆಂಡತಿ ಸಾಬವ್ವ ಹಾಗೂ ಇಬ್ಬರು ಮಕ್ಕಳನ್ನು ದಂಗೆಯೊಂದರಲ್ಲಿ ಕಳೆದುಕೊಂಡ ಮಾಪಣ್ಣ ಅವರು ಪುಟ್ಟ ಕೂಸಾಗಿದ್ದ ಮಲ್ಲಿಕಾರ್ಜುನ ಖರ್ಗೆನ್ನು ಎತ್ತಿಕೊಂಡು ಗುಲ್ಬರ್ಗಕ್ಕೆ ಓಡಿ ಹೋದರು. ಅಲ್ಲಿನ ಎಂ ಎಸ್ ಕೆ ಮಿಲ್ ನಲ್ಲಿ ಕೂಲಿ ಕೆಲಸ ಮಾಡಿ ಮಗನನ್ನು ವಕೀಲನನ್ನಾಗಿ ರೂಪಿಸಿದರು. ಖರ್ಗೆ ಅವರ ಬಾಲ್ಯ ದುಃಖ ಮತ್ತು ಸಂಕಷ್ಟಗಳಿಂದ ಕೂಡಿತ್ತು. ಅವರ ಬದುಕಿನ ಅತ್ಯಂತ ನೋವಿನ ಅಧ್ಯಾಯವಾಗಿದೆ. ತಮ್ಮ ಕುಟುಂಬದಲ್ಲಿ ಆದ ಈ ದುರಂತ ಅವರ ಮನಸ್ಸಿನಲ್ಲಿ ಅಳಿಸಲಾಗದ ಗಾಯವನ್ನು ಮೂಡಿಸಿದರೂ, ಅದೇ ಅವರನ್ನು ದೃಢ ವ್ಯಕ್ತಿತ್ವದ ನಾಯಕನನ್ನಾಗಿ ರೂಪಿಸಿತು.

ಆರ್ಥಿಕವಾಗಿ ಹಿಂದುಳಿದ ಕುಟುಂಬದಲ್ಲಿ ಬೆಳೆದ ಅವರು ವಕೀಲರಾಗಿ ತಮ್ಮ ವೃತ್ತಿಜೀವನ ಆರಂಭಿಸಿ ಸಮಾಜದ ಬಡವರು, ಕಾರ್ಮಿಕರು ಮತ್ತು ಶೋಷಿತರ ಪರವಾಗಿ ಧ್ವನಿಯಾದರು. ಈ ಸೇವಾ ಮನೋಭಾವವೇ ಅವರನ್ನು ರಾಜಕೀಯಕ್ಕೆ ಕರೆತಂದಿತು. ಕಾರ್ಮಿಕ ನಾಯಕರಾಗಿ, ಅಂಬೇಡ್ಕರ್ ವಾದಿಯಾಗಿ, ಬುದ್ಧನ ಧಮ್ಮ ದಲ್ಲಿ ನಂಬಿಕೆ ಇಟ್ಟುಕೊಂಡಿರುವ ಖರ್ಗೆ ಅಂಬೇಡ್ಕರ್ ಅವರ ಆರ್ ಪಿ ಐ ಪಕ್ಷದಿಂದ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಗೆದ್ದು 1972ರಲ್ಲಿ ವಿಧಾನಸಭೆಗೆ ಮೊದಲ ಬಾರಿಗೆ ಆಯ್ಕೆಯಾದರು. ಖರ್ಗೆ ಅವರು ವಿಧಾನಸಭೆಯಲ್ಲಿ ಸತತ ಗೆಲುವು ಸಾಧಿಸಿ ಸೋಲಿಲ್ಲದ ಸರದಾರರಾಗಿ ಹೊರ ಹೊಮ್ಮಿದ್ದಾರೆ. ಆಡಳಿತದಲ್ಲಿ ಪಾರದರ್ಶಕತೆ, ಪ್ರಾಮಾಣಿಕತೆ ಮತ್ತು ಜನಪರ ನಿಲುವಿನಿಂದ ಅವರು ಜನರ ವಿಶ್ವಾಸ ಗಳಿಸಿದರು. ನಂತರ ರಾಷ್ಟ್ರ ರಾಜಕೀಯಕ್ಕೆ ಪ್ರವೇಶಿಸಿ ರೈಲ್ವೆ, ಕಾರ್ಮಿಕ ಮತ್ತು ಉದ್ಯೋಗ ಸೇರಿ ಹಲವು ಪ್ರಮುಖ ಇಲಾಖೆಗಳ ಹಲವು ಪ್ರಮುಖ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸಿದರು.

2022ರಲ್ಲಿ ಖರ್ಗೆ ಅವರು ಎಐಸಿಸಿ ಅಧ್ಯಕ್ಷರಾದರು. ಇದು ಪಕ್ಷದ ಇತಿಹಾಸದಲ್ಲಿ ಮಹತ್ವದ ಘಟ್ಟವೆಂದು ಪರಿಗಣಿಸಲಾಗಿದೆ. ದೀರ್ಘ ರಾಜಕೀಯ ಅನುಭವ, ಸಂಘಟನಾ ಸಾಮರ್ಥ್ಯ ಮತ್ತು ಎಲ್ಲ ನಾಯಕರು, ವರ್ಗಗಳೊಂದಿಗೆ ಬೆರೆಯುವ ಗುಣದಿಂದ ಅವರು ರಾಷ್ಟ್ರೀಯ ಮಟ್ಟದಲ್ಲಿ ಗೌರವಾನ್ವಿತ ನಾಯಕರಾಗಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ಅವರ ಜೀವನ ಯುವಜನತೆಗೆ ಸ್ಫೂರ್ತಿಯ ಸಂದೇಶ ನೀಡುತ್ತದೆ. ಜನ್ಮ, ಬಡತನ ಅಥವಾ ಪರಿಸ್ಥಿತಿಗಳು ವ್ಯಕ್ತಿಯ ಭವಿಷ್ಯವನ್ನು ನಿರ್ಧರಿಸುವುದಿಲ್ಲ; ಬದಲಿಗೆ ಪರಿಶ್ರಮ, ಶಿಕ್ಷಣ, ಆತ್ಮವಿಶ್ವಾಸ ಮತ್ತು ಸಮಾಜಸೇವೆಯ ಮನೋಭಾವವೇ ಯಶಸ್ಸಿನ ನಿಜವಾದ ಆಧಾರ ಎಂಬುದನ್ನು ಅವರ ಬದುಕು ಸಾರುತ್ತದೆ. ಸಂಕಷ್ಟಗಳು ಅವರನ್ನು ಕುಗ್ಗಿಸಲಿಲ್ಲ; ಬದಲಿಗೆ ಇನ್ನಷ್ಟು ಗಟ್ಟಿಯಾಗಿ ನಿಲ್ಲುವಂತೆ ಮಾಡಿತು.

1999 ರಲ್ಲಿ ಕಾಂಗ್ರೆಸ್ ಹೈ ಕಮಾಂಡ್ ಖರ್ಗೆ ಅವರನ್ನು ಕೈ ಬಿಟ್ಟು ಎಸ್ ಎಂ ಕೃಷ್ಣ ಅವರನ್ನು ಮುಖ್ಯಮಂತ್ರಿ ಸ್ಥಾನಕ್ಕೆ ಆಯ್ಕೆ ಮಾಡಿದಾಗ ಪ್ರತಿಕ್ರಿಯೆ ನೀಡಿದ ಖರ್ಗೆ "ನನಗೆ ಮುಖ್ಯಮಂತ್ರಿ ಸ್ಥಾನ ಸಿಕ್ಕಿಲ್ಲ ಅಂತ ಏನೂ ಬೇಸರ ಇಲ್ಲ. ಸೂಕ್ತ ಸಮಯಕ್ಕೆ ಮುನ್ನ, ಹಣೆಬರಹಕ್ಕೂ ಹೆಚ್ಚು ಏನೂ ಸಿಗಲಾರದು" ಎಂದು ಪ್ರತಿಕ್ರಯಿಸಿದರು. ನಂತರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿಕೂಟ ಸರ್ಕಾರದಲ್ಲೂ ಮುಖ್ಯಮಂತ್ರಿಯಾಗುವ ಅವಾಕಾಶವಿತ್ತು. ಆದರೆ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡರು ಖರ್ಗೆ ಅವರ ಆತ್ಮೀಯ ಒಡನಾಡಿ ಧರಂ ಸಿಂಗ್ ಅವರಿಗೆ ರಾಜ್ಯದ ಚುಕ್ಕಾಣಿ ಹಿಡಿಯುವ ಸುಯೋಗ ದೊರೆಯಿತು. ಆಗಲೂ ಖರ್ಗೆ ಬೇಸರಿಸಿಕೊಳ್ಳಲಿಲ್ಲ. ಕಾಂಗ್ರೆಸ್ ನಲ್ಲಿ ಬಂಡಾಯ, ಭಿನ್ನಮತೀಯ ಚಟುವಟಿಕೆಗಳಲ್ಲಿ ಎಂದೂ ಭಾಗಿಯಾದ ಅಪ್ಪಟ ಕಾಂಗ್ರೆಸ್ ಸೇನಾನಿ ಮಲ್ಲಿಕಾರ್ಜನ ಖರ್ಗೆ.

ಖರ್ಗೆ ಅವರು ತಮ್ಮ ಅಧಿಕಾರದುದ್ದಕ್ಕೂ ಹೈದ್ರಾಬಾದ್ ಕರ್ನಾಟಕ ಹಾಗೂ ಗುಲ್ಬರ್ಗದ ಬೆಳವಣಿಗೆ ಗಣನೀಯ ಕೊಡುಗೆ ನೀಡಿದ್ದಾರೆ. ಸಂವಿಧಾನದ 371 ಜೆ ಅಡಿ ದೊರೆತ ವಿಶೇಷ ಸ್ಥಾನಮಾನ ದೊರಕಿಸಿಕೊಡಲು ಶ್ರಮಿಸಿದ ಖರ್ಗೆ ಅವರಿಂದಾಗಿ ಇಲ್ಲಿನ ಜನರ ಬದುಕು ಬದಲಾಗಿದೆ. ಪಶು ವೈದ್ಯ ವಿವಿ, ಹೈ ಕೋರ್ಟ್ ಪೀಠ, ಇಎಸ್ಐ ಆಸ್ಪತ್ರೆ ಹಾಗೂ ವೈದ್ಯ ಕಾಲೇಜು, ರಾಜ್ಯ ಸರಕಾರದ ವೈದ್ಯ ಕಾಲೇಜು, ಜಯದೇವ ಆಸ್ಪತ್ರೆ, ಕೇಂದ್ರ ಸರಕಾರದ ಕೆಲವು ಕಚೇರಿಗಳು, ರೈಲ್ವೆ ಸೌಲಭ್ಯ ಹೀಗೆ ಪಟ್ಟಿ ಮಾಡುತ್ತಾ ಹೋದರೆ ಅಗಾಧ ಸಾಧನೆಗಳನ್ನು ಅವರು ಹೊತ್ತು ನಡೆದಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ವಿಧಾನಸಭೆ ಪ್ರತಿಪಕ್ಷ ನಾಯಕರಾಗಿ, ರಾಜ್ಯಸಭೆಯಲ್ಲಿ ಎರಡನೇ ಬಾರಿ ವಿಪಕ್ಷ ನಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ರಾಜ್ಯದ ಏಕೈಕ ರಾಜಕಾರಣಿ. ಆರು ದಶಕಗಳ ರಾಜ್ಯ ರಾಜಕಾರಣ. ಹೆಚ್ಚುಕಡಿಮೆ ಎರಡು ದಶಕಗಳ ಕಾಲ ರಾಷ್ಟ್ರ ರಾಜಕಾರಣಕ್ಕೆ ಕೊಡುಗೆ ನೀಡಿದ್ದಾರೆ. 8 ದಶಕಗಳಲ್ಲಿ ಖರ್ಗೆ ಒಮ್ಮೆ ಮಾತ್ರ ಲೋಕಸಭಾ ಚುನಾವಣೆಯಲ್ಲಿ ಸೋಲುಂಡಿದ್ದಾರೆ. ಉಳಿದಂತೆ ಸೋಲದ, ದಣಿವರೆಯದ ರಾಜಕಾರಣಿ ಎಂಬುದು ವಿಶೇಷ.

## ಎ.ಪಿ. ಜ್ಞಾನ ಪ್ರಕಾಶ ಗೆ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯಿಂದ ಸನ್ಮಾನ



**ಬಳ್ಳಾರಿ ಜುಲೈ 20** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ನೂತನ ಕುಲಪತಿಯಾಗಿ ಪ್ರೊಫೆಸರ್ ಎ.ಪಿ. ಜ್ಞಾನಪ್ರಕಾಶ್ ಅವರು ನೇಮಕಗೊಂಡಿರುವ ಹಿನ್ನೆಲೆಯಲ್ಲಿ, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ಆತ್ಮೀಯ ಗೆಳೆಯರಾದ, ಪ್ರೊಫೆಸರ್ ಎ.ಪಿ. ಜ್ಞಾನಪ್ರಕಾಶ್ ಅವರನ್ನು ಆತ್ಮೀಯವಾಗಿ ಭೇಟಿ ಮಾಡಿ, ಅಭಿನಂದನೆ ಸಲ್ಲಿಸಿ ಗೌರವಿಸಿ ಸನ್ಮಾನಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವ್ವಾರು ಮಂಜುನಾಥ್ ಅವರು, ಪ್ರೊಫೆಸರ್ ಎ.ಪಿ. ಜ್ಞಾನಪ್ರಕಾಶ್ ಅವರ ಅಪಾರ ಶೈಕ್ಷಣಿಕ ಅನುಭವ, ಆಡಳಿತಾತ್ಮಕ ಸಾಮರ್ಥ್ಯ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿರುವ ಅಮೂಲ್ಯ ಸೇವೆಯನ್ನು ಶ್ಲಾಘಿಸಿದರು. ಅವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಇನ್ನಷ್ಟು ಪ್ರಗತಿ ಸಾಧಿಸಿ, ಗುಣಮಟ್ಟದ ಉನ್ನತ ಶಿಕ್ಷಣವನ್ನು ವಿದ್ಯಾರ್ಥಿಗಳಿಗೆ ತಲುಪಿಸುವಲ್ಲಿ ಹೊಸ ಮೈಲಿಗಲ್ಲುಗಳನ್ನು ನಿರ್ಮಿಸಲಿ ಎಂದು ಶುಭ ಹಾರೈಸಿದರು.

ಸನ್ಮಾನವನ್ನು ಸ್ವೀಕರಿಸಿದ ಪ್ರೊಫೆಸರ್ ಎ.ಪಿ. ಜ್ಞಾನಪ್ರಕಾಶ್ ಅವರು, ಅಭಿನಂದನೆ ಸಲ್ಲಿಸಿದ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಅವ್ವಾರು ಮಂಜುನಾಥ್ ಅವರಿಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಿದರು.

# ಹೊಲದಲ್ಲಿ ಅಗ್ನಿ ಅವಘಡ: ಸಂತ್ರಸ್ತ ರೈತನಿಗೆ ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರು ಸಾಂತ್ವನ



**ಯಾದಗಿರಿ:ಜು.20:**ತಾಲೂಕಿನ ನಾಯಕಲ್ ಗ್ರಾಮದ ರೈತ ಖಾಸಿಂಸಾಬ್ ಹೊರಕೂರ ಅವರಿಗೆ ಸೇರಿದ ಹೊಲದಲ್ಲಿ ಸಂಭವಿಸಿದ ಅಗ್ನಿ ಅವಘಡದಲ್ಲಿ ಕಣಕಿ, ಹೊಟ್ಟು, ಮೇವು ಹಾಗೂ ಪೈಪ್‌ಲೈನ್ ಸಾಮಗ್ರಿಗಳು ಸುಟ್ಟುಹೋಗಿ ಅಪಾರ ನಷ್ಟ ಉಂಟಾದ ಹಿನ್ನೆಲೆಯಲ್ಲಿ ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರು ಅವರು ಭಾನುವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅಗ್ನಿ ಅವಘಡದಿಂದಾದ ಹಾನಿಯನ್ನು ವೀಕ್ಷಿಸಿದ ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರು ಅವರು ರೈತ ಖಾಸಿಂಸಾಬ್ ಹೊರಕೂರ ಅವರೊಂದಿಗೆ ಮಾತುಕತೆ ನಡೆಸಿ, ಬೆಂಕಿ ಅವಘಡದ ಸಂಪೂರ್ಣ ಮಾಹಿತಿ ಪಡೆದುಕೊಂಡರು. ಸುಟ್ಟುಹೋದ ವಸ್ತುಗಳು ಹಾಗೂ ಉಂಟಾದ ನಷ್ಟದ ಬಗ್ಗೆ ಅಧಿಕಾರಿಗಳಿಂದಲೂ ಮಾಹಿತಿ ಪಡೆದ ಅವರು, ಸರ್ಕಾರದಿಂದ ಸೂಕ್ತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಡಗೇರಾ ತಹಸೀಲ್ದಾರ್, ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ವಡಗೇರಾ ತಾಲೂಕು ಅಧ್ಯಕ್ಷ ಖಾಜಾ ಮೈನೋದ್ದಿನ್ ಮಿರ್ಚಿ, ಜಾವೇದ್ ನಾಯಕಲ್, ಶರಣಗೌಡ, ಮರೆಪ್ಪ ಬಿಳ್ಹಾರ, ಮಲ್ಲಣ್ಣಗೌಡ ಗೊಸ್ವಾಮಿ, ಭಾಷುಮಿಯ್ಯ ಹೊನಳ್ಳಿ ಹಾಗೂ ರಸೂಲಸಾಬ್ ಬಾರಕೇರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆ. 9ರಂದು ಕಲಬುರಗಿಯಲ್ಲಿ ಶರಣ ಡೋಹರ ಕಕ್ಕಯ್ಯ ದೇವಸ್ಥಾನ ಟ್ರಸ್ಟಿಂದ ಬೃಹತ್ ಸರ್ವ ಸಮಾಜ ವಧು-ವರರ ಸಮಾವೇಶ



**ಕಲಬುರಗಿ : ಜು.20:**ಶರಣ ಡೋಹರ ಕಕ್ಕಯ್ಯ ದೇವಸ್ಥಾನ ಟ್ರಸ್ಟ್ ವತಿಯಿಂದ 2026ರ ಬೃಹತ್ ಸರ್ವ ಸಮಾಜ ವಧು-ವರರ ಸಮಾವೇಶವನ್ನು ಆಗಸ್ಟ್ 9, 2026 (ಭಾನುವಾರ) ಬೆಳಿಗ್ಗೆ 9 ಗಂಟೆಗೆ ಜಗತ್‌ನ ಕಕ್ಕಯ್ಯ ದೇವಸ್ಥಾನ ಸಮೀಪದ ಅನುಭವ ಮಂಟಪದಲ್ಲಿ ಆಯೋಜಿಸಲಾಗಿದೆ.

ಈ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ವಧು-ವರರ ಸಮಾವೇಶದ ಅಧ್ಯಕ್ಷ ಅನೀಲಕುಮಾರ ಎ. ಸಾವಳಕರ ಮಾತನಾಡಿ, ಸಮಾಜದ ಯುವಕ-ಯುವತಿಯರಿಗೆ ಸೂಕ್ತ ಜೀವನ ಸಂಗಾತಿಯನ್ನು ಆಯ್ಕೆ ಮಾಡಿಕೊಳ್ಳಲು ಉತ್ತಮ ವೇದಿಕೆ ಕಲ್ಪಿಸುವ ಉದ್ದೇಶದಿಂದ ಈ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಸಮಾಜದ ಎಲ್ಲಾ ಬಾಂಧವರು ತನು-ಮನ-ಧನದಿಂದ ಸಹಕಾರ ನೀಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದರು.

ಸಮಾವೇಶದಲ್ಲಿ ಭಾಗವಹಿಸಲು ಆಸಕ್ತ ವಧು-ವರರು ಆಗಸ್ಟ್ 1, 2026ರೊಳಗೆ ತಮ್ಮ ಹೆಸರು ನೋಂದಾಯಿಸಬೇಕು. ವಾಟ್ಸ್ ಆಪ್ ಮೂಲಕ ಫೋಟೋ ಹಾಗೂ ಬಯೋಡೇಟಾ ಕಳುಹಿಸಿ, 200 ರೂ. ನೋಂದಣಿ ಶುಲ್ಕವನ್ನು ಫೋನ್-ಪೇ ಅಥವಾ ಗೂಗಲ್-ಪೇ ಮೂಲಕ ಪಾವತಿಸಿ ನೋಂದಣಿ ಪೂರ್ಣಗೊಳಿಸಬಹುದು. ಸಮಾವೇಶದ ಬಳಿಕ ನೋಂದಾಯಿತ ವಧು-ವರರ ಮಾಹಿತಿಯ ಪುಸ್ತಕವನ್ನು ಅಂಚೆ ಮೂಲಕ ಕಳುಹಿಸಲಾಗುವುದು. ಭಾಗವಹಿಸುವವರಿಗೆ ಬೆಳಗಿನ ಉಪಹಾರ ಹಾಗೂ ಮಧ್ಯಾಹ್ನದ ಭೋಜನದ ವ್ಯವಸ್ಥೆಯೂ ಇರಲಿದೆ.

ಶರಣ ಡೋಹರ ಕಕ್ಕಯ್ಯ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಸಾಯಬಣ್ಣ ಮಸಾಜಿ ಹೊಳ್ಕರ, ವಧು-ವರರ ಸಮಾವೇಶದ ಅಧ್ಯಕ್ಷ ಅನೀಲಕುಮಾರ ಎ. ಸಾವಳಕರ, ಉಪಾಧ್ಯಕ್ಷ ಅರ್ಜುನ ಶಂಕರ ಸೊನಕವಡ, ಪ್ರಧಾನ ಕಾರ್ಯದರ್ಶಿ ಸೂರ್ಯಕಾಂತ ಡಿ. ಸಾವಳಕರ, ಜಂಟಿ ಕಾರ್ಯದರ್ಶಿ ಅಶೋಕ ಸಿದ್ರಾಮ ಖಿರಟಮಲ ಹಾಗೂ ಖಜಾಂಚಿ ದೇವೇಂದ್ರ ಭಾಗಣ್ಣ ಧಡಕೆ ಕಾರ್ಯನಿರ್ವಹಿಸುತ್ತಿದ್ದಾರೆ.

ವಿವಿಧ ಉಪಸಮಿತಿಗಳನ್ನು ರಚಿಸಲಾಗಿದ್ದು, ಅತಿಥಿಗಳ ಸ್ವಾಗತ, ನೋಂದಣಿ, ಆಹಾರ ವಿತರಣೆ, ಪತ್ರಿಕಾ ಪ್ರಚಾರ ಹಾಗೂ ದೇಣಿಗೆ ಸಂಗ್ರಹ ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ಸಮಿತಿಯ ಸದಸ್ಯರಿಗೆ ವಹಿಸಲಾಗಿದೆ.

ಅನೀಲ ಸಾವಳಕರ 7760084892, ಲಿಂಗೋಜಿ ಪಿ. ಗಜರೆ 99451 63577, ಸೂರ್ಯಕಾಂತ ಸಾವಳಕರ 9986615262, ಮೋತಿಲಾಲ ಕಟಕೆ 9342666317, ಅರ್ಜುನ ಸೊನಕವಡ 9902427776 ಹೆಸರು ನೋಂದಣಿಗಾಗಿ ಇವರನ್ನು ಸಂಪರ್ಕಿಸಿ, ಟ್ರಸ್ಟ್ ವತಿಯಿಂದ ಸಮಾಜದ ಎಲ್ಲಾ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಅರ್ಹ ವಧು-ವರರ ಹೆಸರುಗಳನ್ನು ನೋಂದಾಯಿಸಿ ಸಮಾವೇಶವನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಲಾಗಿದೆ.

# ತೆಕ್ಕಲಕೋಟೆಯ ಕಾಡಸಿದ್ದೇಶ್ವತ ಮಠದಲ್ಲಿ ಮಳೆಗಾಗಿ ಸಪ್ತ ಭಜನೆ



**ಸಿರುಗುಪ್ಪ, ಜು.20:** ತಾಲ್ಲೂಕಿನ ತೆಕ್ಕಲಕೋಟೆ ಪಟ್ಟಣದ ಶ್ರೀ ಕಾಡಸಿದ್ದೇಶ್ವರ ಮಠದಲ್ಲಿ ಸಾರ್ವಜನಿಕರಿಂದ ಮಳೆಗಾಗಿ ವಿಶೇಷವಾಗಿ ಸಪ್ತ ಭಜನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಳೆ ಕೊರತೆ ಯಿಂದಾಗಿ ರೈತರು ಆತಂಕಕ್ಕೆ ಇಡಗಿದ್ದು ಅದ್ದರಿಂದ ತೆಕ್ಕಲಕೋಟೆಯಲ್ಲಿ ದಿನದ 24 ಗಂಟೆಯೂ ಭಜನೆಯಲ್ಲಿಯೇ ಕಾಲ ಕಳೆದು ಮಳೆ ಸುರಿಸುವಂತೆ ವರುಣದೇವನಿಗೆ ಪ್ರಾರ್ಥಿಸುತಿದ್ದಾರೆ.

ನಾಡಿನಲ್ಲಿ ಮಳೆ ಬಾರದೆ ಇರುವುದರಿಂದ ವರುಣದೇವನ ಆಗಮನಕ್ಕಾಗಿ ತೆಕ್ಕಲಕೋಟೆ ಶ್ರೀ ಗುರು ಕಾಡಸಿದ್ದೇಶ್ವರ ಮಠದಲ್ಲಿ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಎಲ್ಲ ದೇವರಿಗೆ ವಿಶೇಷ ಪೂಜೆ, ಹಣ್ಣು ಕಾಯಿ ನೈವೇದ್ಯ ಅರ್ಪಿಸುತಿದ್ದಾರೆ. ಸಪ್ತ ಭಜನೆಗೆ ಊರಿನ ಭಕ್ತಾದಿಗಳು ನಿರಂತರವಾಗಿ ಓಂ ನಮಃ ಶಿವಾಯ ಪಂಚಾಕ್ಷರ ಮಹಾ ಮಂತ್ರದ ಭಜನಾ ಕಾರ್ಯಕ್ರಮವನ್ನು ನಡೆಸುತ್ತಾರೆ.

ಈ ಸಂದರ್ಭದಲ್ಲಿ ಶ್ರೀ ಮಠದ ಚಂದ್ರಯ್ಯಸ್ವಾಮಿ,ಮಠದ ಸಿದ್ದಮರಿಸ್ವಾಮಿ, ಎಂ. ಮರಿಸ್ವಾಮಿ, ಎಂ.ಯೋಗೇಶ್ವರಪ್ಪ, ಕೆ.ರಾಮನ್ ಗೌಡ, ಕೆ. ಬಸನಗೌಡ, ಎನ್.ವೀರನಗೌಡ, ಏನ್.ಬಸವನಗೌಡ,ಕೆ .ಸಿದ್ದಪ್ಪ,ಏನ್.ದ್ಯಾಮನಗೌಡ, ಎನ್. ಈರಪ್ಪಗೌಡ, ಶ್ರೀ ಗುರು ಕಾಡಸಿದ್ದೇಶ್ವರ ಸರ್ವ ಭಕ್ತಾದಿಗಳು ಸೇರಿದಂತೆ ಸಾರ್ವಜನಿಕರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE